**ಓ.ಎಸ್. ನಂಃ 302/2020**

**ಪಿ.ಡಬ್ಲ್ಯೂಃ 1**

**ದಿನಾಂಕ 07-07-2025 ರಂದು ಸಾಕ್ಷಿದಾರರನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆ ವಾದಿಯ ಪರ: ಶ್ರೀ.ಬಿ.ಎನ್.ಬಿ. ವಕೀಲರಿಂದಃ**

ನಾನು ಈ ದಿನ ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣಪತ್ರದ ರೂಪದಲ್ಲಿ ಸಲ್ಲಿಸುತ್ತಿದ್ದು ಅದನ್ನು ನನ್ನ ಮಾಹಿತಿ ಮೇರೆಗೆ ನನ್ನ ವಕೀಲರು ತಯಾರಿಸಿರುತ್ತಾರೆ. ಅದರಲ್ಲಿ ಬರೆದಿರುವ ಸಂಗತಿಗಳು ನಿಜ ಇರುತ್ತವೆ ಮತ್ತು ಅದರಲ್ಲಿರುವ ಸಹಿ ನನ್ನದಾಗಿರುತ್ತದೆ.

ದಿ.29/07/1979 ರ ನೊಂದಾಯಿತ ಕ್ರಯ ಪತ್ರವನ್ನು ನಿಪಿ-1 ಎಂದು, ದಿ.29/07/1979 ರ ನೊಂದಾಯಿತ ಕ್ರಯ ಪತ್ರದ ದೃಢೀಕೃತ ನಕಲನ್ನು ನಿಪಿ-2 ಎಂದು, ವಂಶವೃಕ್ಷ ಪ್ರಮಾಣ ಪತ್ರವನ್ನು ನಿಪಿ-3 ಎಂದು, ಇಂಡೆಕ್ಸ್ ಆಫ್ ಲ್ಯಾಂಡ್ಸ ಮತ್ತು ರೆಕಾರ್ಡ್ಸ ಆಫ್ ರೈಟ್ಸ್‌ನ್ನು ನಿಪಿ-4 ಮತ್ತು ನಿಪಿ-5 ಎಂದು, ಪಹಣಿಗಳನ್ನು ನಿಪಿ-6 ರಿಂದ 12 ಎಂದು, ವರ್ಗಾವಣೆ ಆದೇಶದ ದೃಢೀಕೃತ ನಕಲನ್ನು ನಿಪಿ-13 ಎಂದು, ಋಣ ಭಾರ ಪ್ರಮಾಣ ಪತ್ರವನ್ನು ನಿಪಿ-14 ಎಂದು, ದಿನಾಂಕ 31/07/2019 ರಂದು ಉಪವಿಭಾಗಾಧಿಕಾರಿಯವರು ನೀಡಿದ ಹಿಂಬರವನ್ನು ನಿಪಿ-15 ಎಂದು ಗುರುತಿಸಲಾಯಿತು.

**ವಾದಿ ಪರ ವಕೀಲರು ಮುಂದುವರೆದ ಮುಖ್ಯ ವಿಚಾರಣೆಗಾಗಿ ಕಾಲಾವಕಾಶ ಕೋರಿದ್ದು, ಕಾಲಾವಕಾಶ ನೀಡಲಾಯಿತು.**

( ಸಾಕ್ಷಿ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು. )

**ಓ. ಹೇ. ಕೇ. ಸರಿ ಇದೆ.**

**ಸಿವಿಲ್ ಮತ್ತು ಜೆಎಂಎಫ್‌ಸಿ ನ್ಯಾಯಾಧೀಶರು**

**ಕೆ.ಆರ್.ನಗರ**